Prominence to Development of Education: Hamid Ansari

ಸಂಯುಕ್ತ ಕರ್ನಾಟಕ
7ನೇ ಜನವರಿ 2015

# ಶಿಕ್ಷಣ ಅಭಿವೃದ್ಧಿಗೆ ಗಮನವಿರಲಿ: ಅನ್ಸಾರಿ

ಬೆಂಗಳೂರು, ಜ. 6: ಶಿಕ್ಷಣ ಕ್ಷೇತ್ರ ಪ್ರಗತಿಯಲ್ಲಿ ಹಿಂದುಳಿದಿದ್ದು, ರಾಷ್ಟ್ರಾಭಿವೃದ್ಧಿಗೆ ಹಿನ್ನಡೆಯಾಗುತ್ತಿದೆ. ಈ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಶಿಕ್ಷಣ ಅಭಿವೃದ್ಧಿಗೆ ಹೆಚ್ಚಿನ ಗಮನಹರಿಸಬೇಕು ಎಂದು ಉಪರಾಷ್ಟ್ರಪತಿ ಮೊಹಮದ್ ಅಮೀದ್ ಅನ್ಸಾರಿ ಕರೆ ನೀಡಿದರು.

ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ಸುವರ್ಣ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಆರ್ಥಿಕ, ಸಾಮಾಜಿಕ, ಕೈಗಾರಿಕಾ ಸೇರಿದಂತೆ ವಿವಿಧ ರಂಗಗಳಲ್ಲಿ ದೇಶ ಅಭಿವೃದ್ಧಿಯತ್ತ ಸಾಗುತ್ತಿದೆ. ಆದರೆ, ಶಿಕ್ಷಣ ರಂಗ ಮಾತ್ರ ನಿಧಾನಗತಿಯಲ್ಲಿದೆ. ಅಭಿವೃದ್ಧಿಯಲ್ಲಿ ಇನ್ನಷ್ಟು ಹಿಡಿತ ಸಾಧಿಸಬೇಕಾದರೆ ಶಿಕ್ಷಣ ಅಗತ್ಯ. ಈ ಹಿನ್ನೆಲೆಯಲ್ಲಿ ಸರ್ಕಾರಗಳು ಪೂರಕವಾದ ಮೂಲ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಹೇಳಿದರು.

**ಸೂಕ್ತ ಉದ್ಯೋಗ**

ನಿರುದ್ಯೋಗ ಸಮಸ್ಯೆ ನಿವಾರಣೆಯಾಗುವ ನಿಟ್ಟಿನಲ್ಲಿ ಹೊಸ ಯೋಜನೆಗಳು ಸಹಕಾರಿಯಾಗುತ್ತಿವೆ. ಆದರೆ, ಪ್ರಸಕ್ತ ವರ್ಷಗಳಲ್ಲಿ ಎಂಜಿನಿಯರಿಂಗ್ ವಿದ್ಯಾರ್ಥಿಗಳ ಸಂಖ್ಯೆ ಅಧಿಕವಾಗುತ್ತಿದ್ದು, ಸುಮಾರು 7 ಲಕ್ಷ ವಿಜ್ಞಾನ ಮತ್ತು ಇಂಜಿನಿಯರಿಂಗ್ ಪದವೀಧರರು ಹೊರ ಬರುತ್ತಿದ್ದಾರೆ. ಇದರಲ್ಲಿ ಶೇ.25 ರಷ್ಟು ಮಂದಿಗೆ ಮಾತ್ರ ಉದ್ಯೋಗ ಸಿಗುತ್ತಿದೆ. ಉಳಿದ ವಿದ್ಯಾರ್ಥಿಗಳಿಗೆ ಸೂಕ್ತ ಉದ್ಯೋಗ ಸಿಗದೆ ನಿರುದ್ಯೋಗ ಸಮಸ್ಯೆ ಅನುಭವಿಸುತ್ತಿದ್ದಾರೆ. ಇದರಿಂದ ನಿರುದ್ಯೋಗ ಸಮಸ್ಯೆ ಮತ್ತೆ ಚಿಗುರೊಡೆಯುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಉನ್ನತ ಶಿಕ್ಷಣ ಹಲವು ಸಮಸ್ಯೆಗಳಿಂದ ಬಳಲುತ್ತಿದೆ. ಇಲ್ಲಿ ಪಠ್ಯ, ಕಾರ್ಯ ಚಟುವಟಿಕೆ ಹಾಗೂ ಹಳೆಯ ವಿಧಾನಗಳನ್ನು ಸಮಗ್ರವಾಗಿ ಬದಲಾಯಿಸಬೇಕಾಗಿದೆ. ದೇಶದ ಅಗತ್ಯಗಳನ್ನು ಪೂರೈಸುವಂತಹ ಹಾಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸುವಂತಹ ಮೌಲ್ಯಯುತ ಶಿಕ್ಷಣ ಸಿದ್ಧಗೊಳ್ಳಬೇಕು. ಲಭ್ಯತೆ, ಸಮಾನತೆ ಮತ್ತು ಗುಣಮಟ್ಟ ಸಮಸ್ಯೆಗಳು ನಿವಾರಣೆಗೊಂಡು ಮಹಿಳೆಯರಿಗೆ ಮತ್ತು ದುರ್ಬಲ ವರ್ಗದವರ ಕೈಗೆಟುಕುವಂತೆ ಉನ್ನತ ಶಿಕ್ಷಣಗಳು ರೂಪ ತಾಳಬೇಕು. ಬದಲಾಗುತ್ತಿರುವ ಮಾರುಕಟ್ಟೆಯನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಶಿಕ್ಷಣ ನೀತಿ ಯೋಜನೆಗಳನ್ನು ಸಿದ್ಧಪಡಿಸಬೇಕಾಗಿದೆ ಎಂದು ತಿಳಿಸಿದರು.

**ಭ್ರಷ್ಟ ಮುಕ್ತರಾಗಿ**

ರಾಜ್ಯಪಾಲಾ ವಜುಭಾಯಿ ವಾಲಾ ಮಾತನಾಡಿ, ಸಮಾಜ ಸೇವೆಯ ಹಿತದೃಷ್ಟಿಯಿಂದ ಶಿಕ್ಷಣ ಬಲಿಷ್ಠಗೊಳ್ಳಬೇಕು. ಕೇವಲ ಹಣ ಗಳಿಕೆ ಮಾಡಬೇಕು ಎಂಬ ದುರುದ್ದೇಶದಿಂದ ಶಿಕ್ಷಣ ಪದವಿ ಪಡೆಯಬಾರದು. ಸಮಾಜವನ್ನು ಕಟ್ಟುವಂತಹ ಧ್ಯೇಯಗಳನ್ನು ಬೆಳೆಸಿಕೊಳ್ಳಬೇಕು. ದೇಶದ ಯುವಕರು ಭ್ರಷ್ಟ ಮುಕ್ತರಾಗಿ ಭ್ರಷ್ಟಚಾರದಿಂದ ಕೊಳೆಯುತ್ತಿರುವ ಸಮಾಜವನ್ನು ಬದಲಾಯಿಸುವಂತಹ ದಿಟ್ಟತನ ಹೊಂದಬೇಕು. ಆಗ ಮಾತ್ರ ಸಮೃದ್ಧ ರಾಷ್ಟ್ರ ನಿರ್ಮಾಣ ಮಾಡಲು ಸಾಧ್ಯ ಎಂದು ಯುವಕರಿಗೆ ಕಿವಿಮಾತು ಹೇಳಿದರು.

ಶಿಕ್ಷಣದ ಪ್ರಗತಿಗೆ ರಾಜ್ಯ ಸರ್ಕಾರ ವಿವಿಧ ಯೋಜನೆಗಳನ್ನು ರೂಪಿಸಿದ್ದು, ಮೌಲ್ಯಯುತ ಕಾಯ್ದುಕೊಳ್ಳುವಲ್ಲಿ ಎಚ್ಚರಿಕೆ ವಹಿಸಿದೆ. ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದ ವರೆಗೂ ಸರ್ವರಿಗೂ ಶಿಕ್ಷಣ ದೊರಕುವ ಮಹಾದಾಸೆಯನ್ನು ಹೊಂದಿದೆ. ಉನ್ನತ ಶಿಕ್ಷಣ ಮಾಡುವ ಬಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಕಲಿಕೆಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

ರಾಜ್ಯದಲ್ಲಿ ವಿವಿಧ ವಲಯಗಳಿಗಿಂತ ಶಿಕ್ಷಣ ರಂಗ ಉತ್ತಮವಾಗಿದ್ದು, ಮುಂದಿನ ದಿನಗಳಲ್ಲಿ ಉನ್ನತ ಶಿಕ್ಷಣದಲ್ಲಿ ರಾಜ್ಯ ಮುಂಚೂಣಿಯಲ್ಲಿರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭವಿಷ್ಯ ನುಡಿದರು.

ಉನ್ನತ ಶಿಕ್ಷಣ ಸಚಿವ ಆರ್.ವಿ. ದೇಶಪಾಂಡೆ, ಆರ್.ವಿ.ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ.ಎಂ.ಕೆ. ಪಾಂಡುರಂಗ ಶೆಟ್ಟಿ, ಉಪಾಧ್ಯಕ್ಷ ಎನ್. ಪಂಡಿತರಾಧ್ಯ, ಪ್ರಾಂಶುಪಾಲ ಡಾ. ಬಿ.ಎಸ್. ಸತ್ಯನಾರಾಯಣ ಇದ್ದರು.



ಆರ್.ವಿ.ಇಂಜಿನಿಯರಿಂಗ್ ಕಾಲೇಜಿನ ಸುವರ್ಣ ಮಹೋತ್ಸವ ಸಮಾರಂಭವನ್ನು ಉಪರಾಷ್ಟ್ರಪತಿ ಮೊಹಮದ್ ಹಮೀದ್ ಅನ್ಸಾರಿ ಉದ್ಘಾಟಿಸಿದರು. ರಾಜ್ಯಪಾಲ ವಜುಭಾಯಿ ವಾಲಾ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉನ್ನತ ಶಿಕ್ಷಣ ಸಚಿವ ಆರ್.ವಿ. ದೇಶಪಾಂಡೆ, ಆರ್.ವಿ. ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ.ಎಂ.ಕೆ. ಪಾಂಡುರಂಗ ಶೆಟ್ಟಿ, ಉಪಾಧ್ಯಕ್ಷ ಎನ್. ಪಂಡಿತಾರಾಧ್ಯ, ಪ್ರಾಂಶುಪಾಲ ಡಾ. ಬಿ.ಎಸ್. ಸತ್ಯನಾರಾಯಣ ಇದ್ದರು.